ಅ) ಹಾಗಿದ್ದಲ್ಲಿ ಆ ಬಗ್ಗೆ ಕೈಗೊಂಡ ಕ್ರಮಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ ರೇವಣ್ಣ (ವಸತಿ ಸಚಿವರು) :—

ಅ) ಬಂದಿದೆ.

ಆ) ಬಸ್ ನಿಲ್ದಾಣದ ಆವರಣಕ್ಕೆ ಡಾಂಬರೀಕರಣ ಕೆಲಸಕ್ಕಾಗಿ ರೂ.5.36 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಮಂಜೂರಾತಿಯಾಗಿದ್ದು ಟೆಂಡರನ್ನು ಇತ್ಯರ್ಥಗೊಳಿಸಲಾಗಿದೆ. ಮಳೆಗಾಲದ ನಂತರ ಡಾಂಬರೀಕರಣ ಹಾಗೂ ಸುಣ್ಣ ಬಣ್ಣ ಹಚ್ಚುವ ಕೆಲಸ ತೆಗೆದುಕೊಳ್ಳಲಾಗುವುದು. ಈಗಾಗಲೇ ಬಸ್ ನಿಲ್ದಾಣದಲ್ಲಿರುವ ಹಾಲಿ ಶೌಚಾಲಯದ ಪಕ್ಕದಲ್ಲಿಯೇ ಹೊಸದಾದ ಶೌಚಾಲಯವನ್ನು ನಿರ್ಮಿಸಲಾಗಿದೆ.

ತಿಪಟೂರು ನಗರಕ್ಕೆ ಬಸ್ ಡಿಪೋ ಮಂಜೂರು.

1548(2205) ಶ್ರೀ ಬಿ. ನಂಜಾಮರಿ (ತಿಪಟೂರು) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುಮಕೂರು ಜಿಲ್ಲೆಯ ತಿಪಟೂರು ನಗರಕ್ಕೆ ಕೆ.ಎಸ್.ಆರ್.ಟಿ.ಸಿ. ಬಸ್ ಡಿಪೋ ಮಂಜೂರು ಮಾಡಲಾಗಿದೆಯೇ

ಆ) ಹಾಗಿದ್ದಲ್ಲಿ ಅದನ್ನು ಯಾವಾಗ ಪ್ರಾರಂಭಿಸಲಾಗುವುದು

ಇ) ಹಾಗಿಲ್ಲದಿದ್ದಲ್ಲಿ ಡಿಪೋ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :—

ಅ) ಇಲ್ಲಾ

ಆ) ಉದ್ಭವಿಸುವುದಿಲ್ಲ

ಇ) ಅವಶ್ಯಕತೆಯು ಉದ್ಭವಿಸಿದಾಗ ಸಂಪನ್ಮೂಲಗಳ ಲಭ್ಯತೆಯಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕೇಂದ್ರ ಸರ್ಕಾರವು ರಾಜ್ಯದ ಕೊಳಚೆ ನಿರ್ಮೂಲನ ಮಂಡಳಿಗೆ ನೀಡಿರುವ ಸಹಾಯಧನ

1549(2173) ಶ್ರೀ ಪೂಜಾರಿ ಪ್ರಹ್ಲಾದ್ ಹನುಮಂತಪ್ಪ (ಬಾಗಲಕೋಟಿ) :— ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.